ಹಂದನಕೆರೆ ಹೋಬಳಿ ಕೇಂದ್ರದಲ್ಲಿ ಕಲಾ ಮತ್ತು ವಾಣಿಜ್ಯ ಪದವಿ ಪೂರ್ವ ಕಾಲೇಜು ಸ್ಥಾಪಿಸುವುದು

547 (918) ಶ್ರೀ ಸುರೇಶ್ ಬಾಬು. ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕು, ಹಂದನಕೆರೆ ಹೋಬಳಿ ಕೇಂದ್ರಕ್ಕೆ ಸರ್ಕಾರಿ ಪದವಿ ಪೂರ್ವ ಕಲಾ ಮತ್ತು ವಾಣಿಜ್ಯ ಕಾಲೇಜಿನ ಅವಶ್ಯಕತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ಕಾಲೇಜು ಸ್ಥಾಪನೆಗೆ ಅವಶ್ಯಕವಾದ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಗ್ರಾಮಸ್ಥರು ಸಿದ್ದರಿರುವುದರಿಂದ ಈ ಸಾಲಿನಲ್ಲಿ ಕಾಲೇಜು ಮಂಜೂರು ಮಾಡಲಾಗುವುದೇ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಇಲ್ಲ.

ಆ) ಸರ್ಕಾರದ ಆದೇಶ ಸಂಖ್ಯೆ:ಇಡಿ 451 ಯೋಯೋಕ 2009 ದಿನಾಂಕ: 20/02/2010 ರಲ್ಲಿ ಈಗಾಗಲೇ ಮಂಜೂರು ಮಾಡಲಾದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಎಲ್ಲಾ ಮೂಲಭೂತ ಸೌಕರ್ಯ ಗಳನ್ನು ಒದಗಿಸುವವರೆಗೆ ಹೊಸ ಸರ್ಕಾರಿ ಪದವಿ ಪೂರ್ವ ಕಾಲೇಜು ಗಳನ್ನು ಮಂಜೂರು ಮಾಡದಿರಲು ನಿರ್ಧರಿಸಲಾಗಿದೆ.

ಬುಕ್ಕಾ ಪಟ್ಟಣ ಗ್ರಾಮಕ್ಕೆ ಕೆರೆಯಿಂದ ಕುಡಿಯುವ ನೀರು ಪೂರೈಕೆ

548 (919) ಶ್ರೀ ಸುರೇಶ್ ಬಾಬು ಸಿ.ಬಿ (ಚಿಕ್ಕನಾಯಕನಹಳ್ಳಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರದ, ಶಿರಾ ತಾಲ್ಲೂಕಿನ ಬುಕ್ಕಾಪಟ್ಟಣ ಗ್ರಾಮಕ್ಕೆ ಗ್ರಾಮದ ಕೆರೆಯ ಸಮೀಪ ನೀರು ಶುದ್ಧೀಕರಣ ಘಟಕ ಸ್ಥಾಪಿಸಿ, ಪೈಪ್‌ಲೈನ್ ಮುಖಾಂತರ ಕುಡಿಯುವ ನೀರನ್ನು ಒದಗಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;